# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿಶ್ವವಿದ್ಯಾನಿಲಯಗಳಲ್ಲಿ ಪಿ.ಹೆಚ್.ಡಿ ಮತ್ತು ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್. ಮಾದರಿಯಲ್ಲಿ ಫೆಲೋಶಿಫ್ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಎಂಡಬ್ಲ್ಯೂಡಿ 462 ಎಂಡಿಎಸ್ 2016, ದಿನಾಂಕ:24-01-2017
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಎಂಡಬ್ಲ್ಯೂಡಿ 157 ಎಂಡಿಎಸ್ 2017, ದಿನಾಂಕ:09-05-2017
3. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಎಂಡಬ್ಲ್ಯೂಡಿ 281 ಎಂಡಿಎಸ್ 2020, ದಿನಾಂಕ:09/10-11-2020
4. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರ ಪ್ರಸ್ತಾವನೆ ಸಂಖ್ಯೆ:ಅಸಂನಿ/Mphil&Ph.D/ಸಿಆರ್-03/2020-21, ದಿನಾಂಕ:10-03-2021.

*~*~*~*~*~*

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅಲ್ಪಸಂಖ್ಯಾತರ ವಿಷಯಗಳ ಬಗ್ಗೆ ವಿಶ್ವವಿದ್ಯಾನಿಲಯಗಳಲ್ಲಿ ಪಿ.ಹೆಚ್.ಡಿ. ವ್ಯಾಸಂಗ ಮಾಡುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ 3 ವರ್ಷ ಮತ್ತು ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್. ಮಾದರಿಯಲ್ಲಿ 2 ವರ್ಷಗಳ ಅವಧಿಗೆ ಫೆಲೋಶಿಫ್ ನೀಡಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ತಿದ್ದುಪಡಿ ಆದೇಶದ ಷರತ್ತು ಸಂಖ್ಯೆ7ರಲ್ಲಿ ಅಲ್ಪಸಂಖ್ಯಾತರ ವಿಷಯದಲ್ಲಿ ಸಂಶೋಧನೆ ಕೈಗೊಳ್ಳಲು ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಪ್ರಥಮ ಆದ್ಯತೆಯನ್ನು ನೀಡಿ ಇನ್ನುಳಿದ ವಿಷಯಗಳಲ್ಲಿ ಅಧ್ಯಯನ ನಡೆಸುತ್ತಿರುವ ಅಲ್ಪಸಂಖ್ಯಾತರ ಅಭ್ಯರ್ಥಿಗಳನ್ನು ಸಹ ಪರಿಗಣಿಸತಕ್ಕದ್ದು. ಮುಂದುವರೆದು ಈ ಸಂಶೋದನೆಗಳಿಗಾಗಿ ಆಯ್ಕೆಯಾದ ಅಭ್ಯರ್ಥಿಗಳು ಬೇರೆ ಯಾವುದೇ ಸಂಘ ಸಂಸ್ಥೆಗಳು/ಸರ್ಕಾರದ ವತಿಯಿಂದ ನೀಡಲಾಗುವ ವಿದ್ಯಾರ್ಥಿವೇತನದ ಸೌಲಭ್ಯಗಳನ್ನು ಪಡೆಯತಕ್ಕದ್ದಲ್ಲ ಪಡೆದಿದ್ದಲ್ಲಿ ಈ ಸೌಲಭ್ಯಕ್ಕೆ ಅನರ್ಹರಾಗುವರು ಎಂದು ತಿದ್ದುಪಡಿ ಮಾಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ(3)ರಲ್ಲಿ ಓದಲಾದ ತಿದ್ದುಪಡಿ ಆದೇಶದಲ್ಲಿ "ಪಿಹೆಚ್‌ಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 3 ವರ್ಷ ಮತ್ತು ಎಂಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ 2 ವರ್ಷಗಳ ಅವಧಿಗೆ ಮಾತ್ರ ಪ್ರತಿ ವಾರ್ಷಿಕ ರೂ.1,00,000/-ಗಳನ್ನು ನೀಡಲು ಎಂದು ತಿದ್ದುಪಡಿ ಮಾಡಿ ಆದೇಶಿಸಲಾಗಿದೆ.

.............2

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಪತ್ರದಲ್ಲಿ ವಿದ್ಯಾರ್ಥಿಗಳಿಂದ, ಜನಪ್ರತಿನಿಧಿಗಳಿಂದ ಫೆಲೋಶಿಫ್ ಮೊತ್ತವನ್ನು ಮೊದಲಿನ ಆದೇಶದಲ್ಲಿರುವಂತೆ ನೀಡಬೇಕೆಂದು ಕೋರಿಕೆಗಳು ಬಂದಿದ್ದು, ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿರುವ ಹಿನ್ನೆಲೆಯಲ್ಲಿ ಪಿ.ಹೆಚ್.ಡಿ. (3 ವರ್ಷಗಳು) ಮತ್ತು ಎಂ.ಫಿಲ್ (2 ವರ್ಷ ಅವಧಿ) ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಿಂದಿನ ಆದೇಶದಂತೆ ಪ್ರತಿ ತಿಂಗಳು ರೂ.25,000/–ಗಳನ್ನು ಮತ್ತು ಪ್ರತಿ ವರ್ಷಕ್ಕೆ ಒಂದು ಬಾರಿಗೆ ರೂ.10,000/–(ನಿರ್ವಹಣಾ ವೆಚ್ಚ) ಹೀಗೆ ಒಟ್ಟು ವಾರ್ಷಿಕ ರೂ.3.10ಲಕ್ಷಗಳನ್ನು 2021–22ನೇ ಸಾಲಿನಿಂದ ಜಾರಿಗೆ ಬರುವಂತೆ ನೀಡಲು ಸರ್ಕಾರದ ಆದೇಶ ಹೊರಡಿಸಲು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: MWD 141 MDS 2021 ಬೆಂಗಳೂರು ದಿನಾಂಕ:15–04–2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ತಿದ್ದುಪಡಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 281 ಎಂಡಿಎಸ್ 2020, ದಿನಾಂಕ:09/10–11–2020ರನ್ನು ಹಿಂಪಡೆಯಲಾಗಿದೆ ಹಾಗೂ ಅಲ್ಪಸಂಖ್ಯಾತರ ವಿಷಯಗಳ ಬಗ್ಗೆ ಪ್ರಥಮ ಆದ್ಯತೆ ನೀಡಿ ಇನ್ನುಳಿದ ವಿಷಯಗಳಲ್ಲಿ ವಿಶ್ವವಿದ್ಯಾನಿಲಯಗಳಲ್ಲಿ ಪಿ.ಹೆಚ್.ಡಿ. ವ್ಯಾಸಂಗ ಮಾಡುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ 3 ವರ್ಷ ಮತ್ತು ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್. ಮಾದರಿಯಲ್ಲಿ 2 ವರ್ಷ ಅವಧಿಗೆ ಮಾತ್ರ ಪ್ರತಿ ಮಾಹೆಯಾನ ರೂ.25,000/–ಗಳನ್ನು (ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಮತ್ತು ಪ್ರತಿ ವರ್ಷಕ್ಕೆ ಒಂದು ಬಾರಿಗೆ ರೂ.10,000/–ಗಳ (ಹತ್ತು ಸಾವಿರ ರೂಪಾಯಿಗಳು ಮಾತ್ರ) ನಿರ್ವಹಣಾ ವೆಚ್ಚವನ್ನು (ಪ್ರತಿ ವರ್ಷಕ್ಕೆ ಒಟ್ಟು ಮೊತ್ತ ರೂ.3.10ಲಕ್ಷಗಳು)ಫೆಲೋಶಿಫ್ ಮೂಲಕ ನೀಡಲು ಸರ್ಕಾರದ ಆದೇಶ ಸಂಖ್ಯೆ:ಎಂಡಬ್ಲ್ಯೂಡಿ 462 ಎಂಡಿಎಸ್ 2016, ದಿನಾಂಕ:24–01–2017ರಲ್ಲಿನ ಮಂಜೂರಾತಿ ಮತ್ತು ಷರತ್ತುಗಳನ್ನು ಮುಂದುವರೆಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

(ಎಂ.ಎನ್.ಬಾನೊಳ್ಳಿ)
**ಸರ್ಕಾರದ ಉಪ ಕಾರ್ಯದರ್ಶಿ,**
**ಅಲ್ಪಸಂಖ್ಯಾತರ ಕಲ್ಯಾಣ ಹಜ್**
**ಮತ್ತು ವಕ್ಫ್ ಇಲಾಖೆ.**

**ಗೆ:**

1. ಪ್ರಧಾನ ಮಹಾಲೇಖಪಾಲರು, (ಅ ಮತ್ತು ಇ), ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್,
6. ಮಾನ್ಯ ಕೈಮಗ್ಗ ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರು ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ